# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 296 |
| ಉತ್ತರಿಸಬೇಕಾದ ದಿನಾಂಕ | : 07.07.2023. |
| ಸದಸ್ಯರ ಹೆಸರು | : ಶ್ರೀ ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | : ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸಾಧಕ ಕ್ರೀಡಾಳುಗಳಿಗೆ ಸರ್ಕಾರದ ವಿವಿಧ ಉದ್ಯೋಗಗಳಿಗೆ ನೇರ ನೇಮಕಾತಿ ಮಾಡಲಾಗುತ್ತಿದೆಯೇ; | ಹೌದು. |
| ಆ) | ಹಾಗಿದ್ದಲ್ಲಿ, ಯಾವ ಯಾವ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದವರಿಗೆ 'ಎ', 'ಬಿ' ಹಾಗೂ 'ಸಿ' ದರ್ಜೆ ಹುದ್ದೆ ನೀಡಲಾಗುವುದು; ನೌಕರಿ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು; (ವಿವರನೀಡುವುದು) | ರಾಜ್ಯದ ಸಾಧಕ ಕ್ರೀಡಾಳುಗಳಿಗೆ ಸರ್ಕಾರದ ವಿವಿಧ ಉದ್ಯೋಗಗಳಿಗೆ ನೇರ ನೇಮಕಾತಿ ನೀಡಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-<br><br>• ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 204 ಸೇನೆನಿ 2022; ದಿನಾಂಕ: 21-03-2023ರ ಅಧಿಸೂಚನೆಯಲ್ಲಿ ಒಲಿಂಪಿಕ್ಸ್ ಮತ್ತು ಪ್ಯಾರಾಲಿಂಪಿಕ್ಸ್‌ನಲ್ಲಿ ಪದಕ ವಿಜೇತರಾದ ರಾಜ್ಯದ ಕ್ರೀಡಾಪಟುಗಳಿಗೆ ವಿವಿಧ ಇಲಾಖೆಗಳಲ್ಲಿ ಗುಂಪು-ಎ ವೃಂದದ ಹುದ್ದೆಗಳು ಹಾಗೂ ಏಷ್ಯನ್ ಗೇಮ್ಸ್ ಮತ್ತು ಕಾಮನ್‌ವೆಲ್ತ್ ಗೇಮ್ಸ್‌ನಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ವಿವಿಧ ಇಲಾಖೆಗಳಲ್ಲಿ ಗುಂಪು-ಬಿ ವೃಂದದ ಹುದ್ದೆಗಳನ್ನು ನೀಡಲು ನಿಯಮಗಳನ್ನು ರೂಪಿಸಿದೆ.<br><br>• ಸದರಿ ನಿಯಮಗಳಲ್ಲಿ ಸ್ನಾತಕ ಪದವಿ ಹೊಂದಿಲ್ಲದ ಮೇಲ್ಕಾಣಿಸಿದ ಪದಕ ವಿಜೇತರಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಯಾವುದೇ ಸಮೂಹ-ಸಿ ಅಥವಾ ಸಮೂಹ-ಡಿ ಹುದ್ದೆಗಳಿಗೆ (ಆ ಹುದ್ದೆಗಳಿಗೆ ನಿಗಧಿಪಡಿಸಿದ ಶೈಕ್ಷಣಿಕ ಅರ್ಹತೆ ಹೊಂದಿದ್ದಲ್ಲಿ) ನೇಮಿಸಲು ಅವಕಾಶ ಕಲ್ಪಿಸಲಾಗಿದೆ.<br><br>• ಅರಣ್ಯ ಇಲಾಖೆಯಲ್ಲಿ ಗ್ರೂಪ್ 'ಸಿ' ವೃಂದದ ಉಪ ವಲಯ ಅರಣ್ಯಾಧಿಕಾರಿ-ಕಂ-ಮೋಜಣಿದಾರ ಮತ್ತು ಗಸ್ತು ವನಪಾಲಕ (ಅರಣ್ಯ ರಕ್ಷಕ) ವೃಂದಗಳಲ್ಲಿನ ನಿರ್ದಿಷ್ಟಪಡಿಸಿದ ಹುದ್ದೆಗಳಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: FEE 33 FEG 2015 dated: 23.06.2015ರಲ್ಲಿ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: FEE 179 FEG 2015 dated: 30.11.2017ರಲ್ಲಿ ನಿಗದಿಪಡಿಸಲಾದ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದವರಿಗೆ ವಿಶೇಷ ವೃಂದ ಮತ್ತು ನೇಮಕಾತಿ ನಿಯಮಗಳ |

| | | |
|---|---|---|
| | | • ನಿಯಮಾನುಸಾರ ವೈದ್ಯಕೀಯ ಪರೀಕ್ಷೆ ಮತ್ತು ದಾಖಲಾತಿಗಳ ಪರಿಶೀಲನೆಯನ್ನು ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಒಟ್ಟು 59 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. |
| ಈ) | ನೌಕರಿ ನೀಡಲು ಬಾಕಿ ಇದ್ದಲ್ಲಿ, ಎಷ್ಟು ಅರ್ಜಿಗಳು ಪರಿಶೀಲನಾ ಹಂತದಲ್ಲಿವೆ ಅಥವಾ ಆಯ್ಕೆ ಸಮಿತಿ ಮುಂದಿದೆ; (ವಿವರನೀಡುವುದು) | ನೌಕರಿ ನೀಡಲು ಬಾಕಿ ಇರುವ ಹಾಗೂ ಅರ್ಜಿಗಳ ಪರಿಶೀಲನಾ ಹಂತದ ವಿವರಗಳು ಕೆಳಕಂಡಂತಿವೆ:-<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: FEE 179 FEG 2015 ದಿನಾಂಕ:30.11.2017ರಲ್ಲಿ ಅಧಿಸೂಚಿತ Karnataka Forest Department Services (Recruitment of Meritorious Sports persons in the category of Deputy Range Forest Officer, Forest Guard and Forest Watcher) (Special) Rules, 2017ರನ್ವಯ ಅರಣ್ಯ ಇಲಾಖೆಯ ಅಧಿಸೂಚನೆ ಸಂಖ್ಯೆ: ಬಿ9/ನೇಮಕಾತಿ/ಸ್ಪೋರ್ಟ್ಸ್/ವಿವ-3/2017-18, ದಿನಾಂಕ: 17.01.2018ಗೆ ಸಂಬಂಧಿಸಿದಂತೆ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರಿಟ್ ಅರ್ಜಿ ಸಂಖ್ಯೆ: 6265/2021 (S-KSAT) c/w ರಿಟ್ ಅರ್ಜಿ ಸಂಖ್ಯೆ: 10785/2020 (S-KSAT)ರಲ್ಲಿ ದಿನಾಂಕ: 07.07.2021ರಂದು ನೀಡಿರುವ ಅಂತಿಮ ಆದೇಶದಂತೆ ಸ್ಪೋರ್ಟ್ಸ್ ಕೋಟಾದಡಿ 10 ಉಪ ವಲಯ ಅರಣ್ಯಾಧಿಕಾರಿ-ಕಂ-ಮೋಜಣಿದಾರ ಹುದ್ದೆಗಳಿಗೆ ಅರ್ಹ ಐದು (5) ಅಭ್ಯರ್ಥಿಗಳಿಗೆ 1:5 ಅಂತಿಮ ಆಯ್ಕೆ ಪಟ್ಟಿಯನ್ನು ದಿನಾಂಕ: 22.05.2023ರಂದು ಪ್ರಕಟಿಸಲಾಗಿದ್ದು ನೇರ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>ಪೊಲೀಸ್ ಇಲಾಖೆಯಲ್ಲಿ ಬಾಕಿ ಇರುವ 25 ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನಾ ಪ್ರಕ್ರಿಯೆಯು ವಿವಿಧ ಹಂತದಲ್ಲಿರುತ್ತದೆ. |
| ಉ) | ಸರ್ಕಾರಿ ಉದ್ಯೋಗಗಳಲ್ಲಿ ಕ್ರೀಡಾಪಟುಗಳಿಗೆ ಮೀಸಲಾತಿಯನ್ನು ನೀಡಲಾಗುತ್ತಿದೆಯೇ; | ಹೌದು. |
| ಊ) | ಮೀಸಲಾತಿ ನೀಡುತ್ತಿದ್ದಲ್ಲಿ, ಯಾವ ಯಾವ ಇಲಾಖೆಗಳ ನೇಮಕಾತಿಗಳಲ್ಲಿ ಮೀಸಲಾತಿ ನೀಡಲಾಗುತ್ತಿದೆ; ಶೇಕಡಾವಾರು ಪ್ರಮಾಣ ಎಷ್ಟು; (ಸಂಪೂರ್ಣ ವಿವರ ನೀಡುವುದು) | ಪೊಲೀಸ್ ಇಲಾಖೆ ಮತ್ತು ಅರಣ್ಯ ಇಲಾಖೆಗಳು ಸಾಧಕ ಕ್ರೀಡಾಪಟುಗಳ ನೇಮಕಾತಿಗೆ ಕ್ರಮ ಕೈಗೊಂಡಿದ್ದು, ವಿವರಗಳನ್ನು ಮೇಲಿನ ಉತ್ತರಗಳಲ್ಲಿ ನೀಡಿದೆ.<br><br>ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ 176 ತರಬೇತುದಾರರು ಕಂ ಸಂಯೋಜಕರ |

| | | |
|---|---|---|
| | | ಹುದ್ದೆಗಳನ್ನು ಹೊಸದಾಗಿ ಸೃಜಿಸಲಾಗಿದ್ದು, ಈ ಹುದ್ದೆಗಳ ನೇಮಕಾತಿಯಲ್ಲಿ ಸಾಧಕ ಕ್ರೀಡಾಪಟುಗಳಿಗೆ 50% ರಷ್ಟು ಮೀಸಲಾತಿ ಅವಕಾಶ ಕಲ್ಪಿಸಲಾಗಿದೆ. ಸದರಿ ಹುದ್ದೆಗಳನ್ನು ಒಳಗೊಂಡಂತೆ ಇಲಾಖೆಯ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳ ಕರಡನ್ನು ದಿನಾಂಕ: 27-03-2023 ರಂದು ಅಧಿಸೂಚಿಸಲಾಗಿದ್ದು, ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿರುತ್ತದೆ. ಸದರಿ ನಿಯಮಗಳಲ್ಲಿ ಸಹಾಯಕ ನಿರ್ದೇಶಕರು ಹಾಗೂ ತರಬೇತುದಾರರ ವೃಂದಗಳಿಗೆ ಸಾಧಕ ಕ್ರೀಡಾಪಟುಗಳನ್ನು ಹಾಗೂ ಅನುಭವಿ ತರಬೇತುದಾರರನ್ನು ನೇಮಕ ಮಾಡಲು ಅವಕಾಶ ಕಲ್ಪಿಸಲಾಗಿದೆ. ಪ್ರಸ್ತುತ ಆಕ್ಷೇಪಣೆಗಳನ್ನು ಕ್ರೋಢೀಕರಿಸಿ, ಪರಿಶೀಲಿಸಲಾಗುತ್ತಿದ್ದು, ಶೀಘ್ರ ಅಂತಿಮ ಅಧಿಸೂಚನೆ ಹೊರಡಿಸಲಾಗುವುದು. |
| ಋ) | ಸರ್ಕಾರದ ಎಲ್ಲಾ ಹುದ್ದೆಗಳ ನೇಮಕಾತಿಗಳಲ್ಲಿ ಕ್ರೀಡಾಪಟುಗಳಿಗೆ ಮೀಸಲಾತಿ ನೀಡುವ ಚಿಂತನೆ ಇದೆಯೇ? | ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸಾಧಕ ಕ್ರೀಡಾಪಟುಗಳಿಗೆ 2% ರಷ್ಟು ಸಮತಲ ಮೀಸಲಾತಿ ಕಲ್ಪಿಸುವ ಬಗ್ಗೆ ವಿವಿಧ ಇಲಾಖೆಗಳ ಅಭಿಪ್ರಾಯವನ್ನು ಪಡೆದು ಕ್ರೋಢೀಕರಿಸಿ ವಿಶೇಷ ನಿಯಮಗಳನ್ನು ರೂಪಿಸುವ ಕುರಿತು ಪರಿಶೀಲಿಸಲಾಗುತ್ತಿದೆ. |

**ವೈಎಸ್ ಡಿ/ಸಿಡಿಎನ್/128/2023**

**(ಬಿ ನಾಗೇಂದ್ರ)**
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು